# ಮೈಸೂರು ವಿಶ್ವವಿದ್ಯಾನಿಲಯ

(ಸ್ಥಾಪನೆ-1916)
(4ನೇ ಆವೃತ್ತಿಯ ನ್ಯಾಕ್ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ)
(ಎನ್.ಐ.ಆರ್.ಎಫ್.-2023: ವಿಶ್ವವಿದ್ಯಾನಿಲಯ ವರ್ಗದಲ್ಲಿ 44ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 71ನೇ ಸ್ಥಾನ)

ಸಂಖ್ಯೆ: ಪವಿ/8.1/ಪಿ.ಜಿ.ಬಿ/75/2009-10

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
ದಿನಾಂಕ: 23-04-2024

## ಅಧಿಸೂಚನೆ

ವಿಷಯ: ಮೇ/ಜೂನ್-2024ರಲ್ಲಿ ಜರುಗಲಿರುವ ಎರಡನೇ ಸೆಮಿಸ್ಟರ್ B.Ed & M.Ed (RIE) ಸ್ನಾತಕ/ಸ್ನಾತಕೋತ್ತರ ಪದವಿ ಪರೀಕ್ಷೆಯ ಬಗ್ಗೆ.

ಉಲ್ಲೇಖ: ವಿ.ವಿ. ಅಧಿಸೂಚನೆ ಸಂಖ್ಯೆ: AC6/159/2015-16, ದಿನಾಂಕ: 17-12-2022.

******

ಮೇ/ಜೂನ್-2024ರ ಮಾಹೆಯಲ್ಲಿ ನಡೆಯಲಿರುವ ಎರಡನೇ ಸೆಮಿಸ್ಟರ್ B.Ed & M.Ed (RIE) ಸ್ನಾತಕ/ಸ್ನಾತಕೋತ್ತರ ಪದವಿ ಪರೀಕ್ಷೆ ಸಂಬಂಧದ ವೇಳಾಪಟ್ಟಿ ಹಾಗೂ ಪರೀಕ್ಷಾ ಶುಲ್ಕದ ಮಾಹಿತಿಗಳು ಕೆಳಕಂಡಂತಿರುತ್ತದೆ.

| ಕ್ರ.ಸಂ. | ವಿವರಗಳು | ಅಂತಿಮ ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕಗಳನ್ನು ಆನ್‌ಲೈನ್ ಮುಖಾಂತರ ಪಾವತಿಸಿ ಹಾಗೂ ಶುಲ್ಕ ಪಾವತಿಸಿದ ನಂತರ ಪರೀಕ್ಷಾ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು (ವಿದ್ಯಾರ್ಥಿಗಳು UUCMS ಅಡಿಯಲ್ಲಿ ಪರೀಕ್ಷಾ ಶುಲ್ಕಗಳನ್ನು ಪಾವತಿಸುವ ಸಂದರ್ಭದಲ್ಲಿ ತಮ್ಮ ಕೋರ್ಸಿನ ಪತ್ರಿಕೆಗಳನ್ನು ಪರಿಶೀಲಿಸಿ ಆಯ್ಕೆ ಮಾಡಿಕೊಳ್ಳುವುದು). | 02-05-2024 |
| 2 | ರೂ.100/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ ($1^{st}$ penalty) | 03-05-2024 |
| 3 | ರೂ.200/-ಗಳ ದಂಡ ಶುಲ್ಕದೊಂದಿಗೆ ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕಡೆಯ ದಿನಾಂಕ ($2^{nd}$ penalty) | 04-05-2024 |
| 4 | $C_1$ & $C_2$ (continuous assessment) ಅಂಕಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಹಾಗೂ ಹಾಜರಾತಿಯನ್ನು ಅಪ್‌ಲೋಡ್ ಮಾಡುವ ದಿನಾಂಕ | 20-05-2024 |
| 5 | ಪ್ರವೇಶ ಪತ್ರಗಳ ಮುದ್ರಣದ ನಂತರ ಈ ಕಛೇರಿಗೆ ವಿದ್ಯಾರ್ಥಿಗಳು ಪಾವತಿಸಿರುವ ಪರೀಕ್ಷಾ ಶುಲ್ಕಗಳ ಮಾಹಿತಿಯನ್ನು ಕ್ರೋಢಿಕರಿಸಿ ಈ ಕಛೇರಿಗೆ ಸಲ್ಲಿಸುವುದು. | 21-05-2024 |
| 6 | ವೇಳಾಪಟ್ಟಿ ಮತ್ತು ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಅಂತಿಮ ದಿನಾಂಕ | 08-05-2024 |
| 7 | ಲಿಖಿತ ಪರೀಕ್ಷೆ ಪ್ರಾರಂಭವಾಗುವ ದಿನಾಂಕ | 22-05-2024 |

**ಸೂಚನೆಗಳು:**

1. ಎರಡನೇ ಸೆಮಿಸ್ಟರ್‌ನ ಪರೀಕ್ಷಾ ಕಾರ್ಯಗಳು UUCMS ಅಡಿಯಲ್ಲಿರುವುದರಿಂದ ಕಾಲೇಜಿನ ವತಿಯಿಂದ "academic moduleನಲ್ಲಿ curiculam mapping" ಮಾಡಿದ ನಂತರ, ವಿದ್ಯಾರ್ಥಿಗಳು ಆನ್‌ಲೈನ್ (UUCMS) ಮೂಲಕ ಪತ್ರಿಕೆಗಳನ್ನು ಆಯ್ಕೆ ಮಾಡಿಕೊಂಡು "mapping" ಮಾಡಲು ಕಾಲೇಜಿನವರು QP Code/Course Code ಗಳನ್ನು ನೀಡಬೇಕು ಹಾಗೂ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಗದರ್ಶನ ನೀಡುವುದು.

2. ಎಲ್ಲಾ ಪ್ರಾಯೋಗಿಕ ಪರೀಕ್ಷೆಗಳನ್ನು ಲಿಖಿತ ಪರೀಕ್ಷೆಗಳ ನಂತರ ಪೂರ್ಣಗೊಳಿಸುವುದು. ಸದರಿ ಪರೀಕ್ಷೆಗೆ ಬಾಹ್ಯ ಪರೀಕ್ಷರು **(External Examiners)** ಲಭ್ಯವಾಗದ ಸಂದರ್ಭದಲ್ಲಿ ಆಂತರಿಕ ಪರೀಕ್ಷರನ್ನೇ ಬಳಸಿಕೊಂಡು ಪರೀಕ್ಷೆ ನಡೆಸುವುದು **(Internal Examiners)**.

3. ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ **online** ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.

4. ಕಾಲೇಜಿನ ಆಡಳಿತ ವರ್ಗ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳು ಭರ್ತಿ ಮಾಡಿದ ವಿಷಯಗಳ ಆಯ್ಕೆ **(subject selection)** ಹಾಗೂ ಪರೀಕ್ಷಾ ಅರ್ಜಿಗಳಲ್ಲಿ ನ್ಯೂನತೆಗಳಿದ್ದರೆ, (ಪ್ರವೇಶ ಪತ್ರಗಳ ಮುದ್ರಣಕ್ಕೆ ಸಂಬಂಧಿಸಿದಂತೆ, ಪ್ರಾಂಶುಪಾಲರ ಅನುಮೋದನೆ ಪಡೆಯುವ ಮೊದಲು ವಿದ್ಯಾರ್ಥಿಗಳು ಅಯ್ಕೆ ಮಾಡಿಕೊಂಡಿರುವ ಪತ್ರಿಕೆಗಳನ್ನು ಪುನಃ ಪರಿಶೀಲಿಸಿಕೊಳ್ಳುವುದು, ಇಲ್ಲದಿದ್ದರೆ ಕಾಲೇಜಿನ ಪ್ರಾಂಶುಪಾಲರು ಇಂತಹ ತಪ್ಪುಗಳಿಗೆ ಹೊಣೆಗಾರರಾಗಿರುತ್ತಾರೆ.

ಪರೀಕ್ಷಾ ಶುಲ್ಕಗಳು:

**Examination Fee for Even Semester M.Ed (RIE Scheme)**

| | | |
|---|---|---|
| **i) Whole Exam (per exam)** | : | **Rs. 1730=00** |
| **ii) Per Paper with Practical** | : | **Rs. 1065=00** |
| **iii) Per Paper without Practical** | : | **Rs. 690=00** |
| **Marks Card Fee** | : | **Rs. 387=00** |

**Examination Fee for Even Semester B.Ed. (RIE Scheme)**

| | | |
|---|---|---|
| **i) Whole Exam (per exam)** | : | **Rs. 1573=00** |
| **ii) Per Paper with Practical** | : | **Rs. 932=00** |
| **iii) Per Paper without Practical** | : | **Rs. 532=00** |
| **Marks Card Fee** | : | **Rs. 387=00** |

***Subject to a maximum of whole examination Fee fixed per semester.***

ವಿಶೇಷ ಸೂಚನೆಗಳು:

1. **ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.**
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ **ರೂ.387/–**ನ್ನು ಸಹ ಪಾವತಿಸತಕ್ಕದ್ದು. ಪರೀಕ್ಷಾ ಅರ್ಜಿಗೆ ಪ್ರತ್ಯೇಕ ಶುಲ್ಕವಿರುವುದಿಲ್ಲ.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ: ವಿಫ/1/9/2013–14, ದಿನಾಂಕ 25.09.2013 ಪ್ರಕಾರ 2013–14ನೇ ಶೈಕ್ಷಣಿಕ ಸಾಲಿನಿಂದ ಪದವಿ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.2.5 ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮ ತೆಗೆದುಕೊಳ್ಳುವುದು.
4. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ ರೂ.2.5 ಲಕ್ಷಗಳು ಮೀರಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ಪ್ರವರ್ಗ–1 ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು.
5. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ online ಮೂಲಕ ಪ್ರಿಂಟ್ ಪಡೆದು, ಕುಲಸಚಿವರು (ಪರೀಕ್ಷಾಂಗ) ಇವರ ಯಥಾಪ್ರತಿ (Facsimile) ಹಾಕಿಸಿಕೊಳ್ಳಬೇಕು ಮತ್ತು ಕುಲಸಚಿವ (ಪರೀಕ್ಷಾಂಗ) ಅವರ ಯಥಾಪ್ರತಿ (Facsimile) ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಅವಕಾಶವಿರುವುದಿಲ್ಲ.

ವಿದ್ಯಾರ್ಥಿಗಳಿಗೆ ಸೂಚನೆಗಳು:

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.

2. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. 2022–23ನೇ ಸಾಲಿನಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮುಖಾಂತರವೇ ಕಡ್ಡಾಯವಾಗಿ ಪಾವತಿಸತಕ್ಕದ್ದು.
4. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿಸುವುದು ಹಾಗೂ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ ಎಂದು ಪ್ರಾಂಶುಪಾಲರು ಸಹಿ ಮಾಡಿ ದೃಢೀಕರಿಸಿರುವ ಭಾವಚಿತ್ರವನ್ನು ಹಾಜರಾತಿ ಪತ್ರಕ್ಕೆ ಅಂಟಿಸಿ ಪರೀಕ್ಷಾ ಅರ್ಜಿಯೊಂದಿಗೆ ಕಾಲೇಜಿಗೆ ನೀಡುವುದು.
5. **ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**

**ಪ್ರಾಂಶುಪಾಲರಿಗೆ ಸಾಮಾನ್ಯ ಸೂಚನೆಗಳು:**

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶ ಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ(ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.
2. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರು ಮಾಡಿದ ಕವರುಗಳಲ್ಲಿ ಇಟ್ಟು ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮರು ದಿನವೇ ಕಳುಹಿಸಬೇಕು.
3. ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.
4. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

24/4

**ಕುಲಸಚಿವ (ಪರೀಕ್ಷಾಂಗ)**

**ಇವರಿಗೆ:**

1. ಪ್ರಾಂಶುಪಾಲರು, ಪ್ರಾದೇಶಿಕ ಶಿಕ್ಷಣ ಸಂಸ್ಥೆ (RIE), ಮಾನಸಗಂಗೋತ್ರಿ, ಮೈಸೂರು.
2. ಕುಲಸಚಿವರು/ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಉಪ ಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಕುಲಸಚಿವರು(ಪರೀಕ್ಷಾಂಗ), ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಸಂಬಂಧಪಟ್ಟ ನಿರ್ವಾಹಕರು, ಪ.ವಿ.8.9./1.7. ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಮಾನ್ಯ ಕುಲಪತಿ/ಕುಲಸಚಿವ/ಕುಲಸಚಿವ (ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.